# ಕರ್ನಾಟಕ ವಿಧಾನ ಪರಿಷತ್ತು

ವಿಷಯ:- ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಕೆ.ಎ. ತಿಪ್ಪೇಸ್ವಾಮಿ ಇವರ ನಿಯಮ 72ರಡಿ - ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲಾ-ಕಾಲೇಜುಗಳಲ್ಲಿ ಓದುತ್ತಿರುವ ಹದಿ-ಹರೆಯದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಸ್ಯಾನಿಟರಿ ನ್ಯಾಪ್ ಕೀನ್ ವಿತರಿಸುವ ಯೋಜನೆ ಕೋವಿಡ್ ನಂತರ ಸ್ಥಗಿತಗೊಂಡಿದೆ. ಇದರಿಂದ ಹೆಣ್ಣು ಮಕ್ಕಳು ಮುಟ್ಟಿನ ಸಮಯದಲ್ಲಿ ನೈರ್ಮಲ್ಯ ಕಾಪಾಡಿಕೊಳ್ಳಲಿ ಎಂಬ ಉದ್ದೇಶದಿಂದ ಜಾರಿಗೆ ತಂದ ಯೋಜನೆ ಅಧಿಕಾರಿಗಳ ನಿರ್ಲಕ್ಷ್ಯದಿಂದ ಸ್ಥಗಿತಗೊಂಡಿದೆ. ಇದರಿಂದ ಮುಟ್ಟಿನ ಸಮಯದಲ್ಲಿ ಗ್ರಾಮೀಣ ಭಾಗದ ಮಹಿಳೆಯರು ಬಟ್ಟೆಯನ್ನು ಉಪಯೋಗಿಸುವುದರಿಂದ ಶುಚಿತ್ವ ಕಾಪಾಡಿಕೊಳ್ಳಲು ಆಗದೇ ಚರ್ಮರೋಗ, ಮೂತ್ರ ರೋಗ ಮುಂತಾದ ಆರೋಗ್ಯ ಸಮಸ್ಯೆಗಳನ್ನು ಅನುಭವಿಸುತ್ತಿದ್ದಾರೆ. ಹದಿಯರೆಯದ ಹೆಣ್ಣು ಮಕ್ಕಳ ಮತ್ತು ಮಹಿಳೆಯರು ದಿನ ನಿತ್ಯ ಅನುಭವಿಸುತ್ತಿರುವ ಸಂಕಷ್ಟದ ಬಗ್ಗೆ ದಿನಪತ್ರಿಕೆಗಳಲ್ಲಿ ವಿವರವಾದ ವರದಿ ಮತ್ತು ಲೇಖನಗಳು ಪ್ರಕಟವಾಗುತ್ತಿವೆ. ಈ ಬಗ್ಗೆ ಕೈಗೊಂಡಿರುವ ಸರಿಪಡಿಸುವ ಕ್ರಮದ ಬಗ್ಗೆ ಸರ್ಕಾರದ ಗಮನವನ್ನು ಸೆಳೆಯಬಯಸುತ್ತೇವೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಉತ್ತರ.

ಶುಚಿ ಕಾರ್ಯಕ್ರಮವನ್ನು ಕರ್ನಾಟಕ ಸರ್ಕಾರ 2013-14ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಹದಿಹರೆಯದ ಹೆಣ್ಣು ಮಕ್ಕಳಿಗೆ ಉಚಿತವಾಗಿ ಸ್ಯಾನಿಟರಿ ನ್ಯಾಪ್‌ಕಿನ್‌ಗಳನ್ನು ನೀಡಲು "ಶುಚಿ" ಯೋಜನೆಯನ್ನು ಪ್ರಾರಂಭಿಸಲಾಯಿತು. ಈ ಕಾರ್ಯಕ್ರಮದಡಿ ಹದಿಹರೆಯದ ಹೆಣ್ಣು ಮಕ್ಕಳಿಗೆ ಪ್ರತಿ ತಿಂಗಳಿಗೆ ತಲಾ ಒಂದರಂತೆ ಉಚಿತವಾಗಿ ಸ್ಯಾನಿಟರಿ ನ್ಯಾಪ್‌ಕಿನ್ ಪ್ಯಾಕೆಟ್‌ಗಳನ್ನು ವಿತರಿಸಲಾಗುತ್ತದೆ.

ಕಾರ್ಯಕ್ರಮದ ಆರಂಭದಿಂದಲೂ 2018-19ನೇ ಸಾಲಿನವರೆಗೂ ಮಕ್ಕಳಿಗೆ ಸ್ಯಾನಿಟರಿ ನ್ಯಾಪ್ಕಿನ್ ಪ್ಯಾಡ್‌ಗಳನ್ನು ನಿರಂತರವಾಗಿ ವಿತರಿಸಲಾಗುತ್ತಿತ್ತು. ತದನಂತರ ಕೋವಿಡ್-19 ಸಾಂಕ್ರಾಮಿಕ ರೋಗದ ಪರಿಸ್ಥಿತಿಯ ಹಿನ್ನೆಲೆ ಹಾಗೂ ಟೆಂಡರ್ ಸಂಗ್ರಹಣೆ ಕಾರಣಾಂತರಗಳಿಂದ ಕಾರ್ಯಕ್ರಮದಡಿ ಸಂಗ್ರಹಣೆ ಪ್ರಕ್ರಿಯೆಯು ವಿಳಂಬವಾಗಿರುತ್ತದೆ.

ತಾಂತ್ರಿಕ ಬಿಡ್ ವೈಫಲ್ಯಗಳಿಂದ ಶುಚಿಯೋಜನೆಯಡಿ ಸ್ಯಾನಿಟರಿ ನ್ಯಾಪ್‌ಕಿನ್‌ಗಳ ಸಂಗ್ರಹಣೆ ಹಾಗೂ ಮಕ್ಕಳಿಗೆ ಸಮಯಾನುಸಾರ ದಾಸ್ತಾನುಗಳ ಪೂರೈಕೆಯಲ್ಲಿ ಅನಿವಾರ್ಯವಾಗಿ ವಿಳಂಬವಾಗಿರುತ್ತದೆ ಹೊರತಾಗಿ ಕಾರ್ಯಕ್ರಮ ಸ್ಥಗಿತಗೊಂಡಿರುವುದಿಲ್ಲ. ಶುಚಿ ಯೋಜನೆಯಂತಹ ಮಹತ್ವಾಕಾಂಕ್ಷಿ ಯೋಜನೆಯನ್ನು ಯಶಸ್ವಿ ಅನುಷ್ಠಾನ ಹಾಗೂ ನಿರಂತರ ಚಾಲ್ತಿಯಲ್ಲಿಡಲು ಇಲಾಖೆ ಮತ್ತು ಸರ್ಕಾರವು ಬದ್ಧವಾಗಿದೆ.

ಸಂಖ್ಯೆ: ಆಕುಕ 23 ಎಸ್.ಟಿ.ಕ್ಯೂ 2023

(ಡಾ|| ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು